ಬುಧವಾರ 13.05.2026 ಬೆಂಗಳೂರು ಬೆಲೆ: 5ರೂ 2 ಪುಟಗಳು ಸಂಪುಟ 01 ಸಂಚಿಕೆ 189 Wednesday Bangalore Price: 5/- Rs 2 Pages Volume 01 Issue 189

PRGI/RNI: KNKAN/25/A1348

ಕನ್ನಡ ದಿನಪತ್ರಿಕೆ

ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

DIGITAL VARTHE

digitalvarthe@gmail.com
www.digitalvarthe.com
epaper.digitalvarthe.com
Mob: 9538786812
Office: 9480847498

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಾರಥ್ಯದಲ್ಲಿ

"ಸನಾತನ ಧರ್ಮ ನಿರ್ಮೂಲನೆ ಆಗಬೇಕು" ಉದಯನಿಧಿ ಸ್ಟಾಲಿನ್ ವಿವಾದಾತ್ಮಕ ಹೇಳಿಕೆ

ಚೆನ್ನೈ: ತಮಿಳುನಾಡಿನ ರಾಜಕೀಯದಲ್ಲಿ ಇತ್ತೀಚೆಗೆ ನಡೆದ ಮಹತ್ವದ ಬೆಳವಣಿಗೆಗಳ ನಡುವೆ ಡಿಎಂಕೆ ನಾಯಕ ಹಾಗೂ ನೂತನ ವಿರೋಧ ಪಕ್ಷದ ನಾಯಕ ಉದಯನಿಧಿ ಸ್ಟಾಲಿನ್ ಮತ್ತೊಮ್ಮೆ ಸನಾತನ ಧರ್ಮದ ಕುರಿತು ವಿವಾದಾತ್ಮಕ ಹೇಳಿಕೆ ನೀಡಿ ರಾಜಕೀಯ ವಲಯದಲ್ಲಿ ಹೊಸ ಚರ್ಚೆಗೆ ಕಾರಣರಾಗಿದ್ದಾರೆ. ಸಮಾಜದಲ್ಲಿ ಜಾತಿ, ಅಸಮಾನತೆ ಮತ್ತು ಧರ್ಮದ ಹೆಸರಿನಲ್ಲಿ ಜನರನ್ನು ವಿಭಜಿಸುವ ಯಾವುದೇ ವ್ಯವಸ್ಥೆ ಮುಂದುವರಿಯಬಾರದು ಎಂದು ಅವರು ಸ್ಪಷ್ಟವಾಗಿ ಹೇಳಿದ್ದು, ಸನಾತನ ಧರ್ಮ ಸಂಪೂರ್ಣವಾಗಿ ನಿರ್ಮೂಲನೆ ಆಗಬೇಕೆಂಬ ತಮ್ಮ ಹಿಂದಿನ ನಿಲುವನ್ನು ಪುನರುಚ್ಚರಿಸಿದ್ದಾರೆ. ಈ ಹೇಳಿಕೆ ಇದೀಗ ತಮಿಳುನಾಡು ಮಾತ್ರವಲ್ಲದೆ ದೇಶದಾದ್ಯಂತ ರಾಜಕೀಯ ಹಾಗೂ ಸಾಮಾಜಿಕ ವಲಯಗಳಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ.

ತಮಿಳುನಾಡು ವಿಧಾನ ಸಭೆಯಲ್ಲಿ ಮಾತನಾಡಿದ ಉದಯನಿಧಿ ಸ್ಟಾಲಿನ್, ಆಡಳಿತ ಪಕ್ಷ ಮತ್ತು ವಿರೋಧ ಪಕ್ಷಗಳು ರಾಜಕೀಯವಾಗಿ ವಿಭಿನ್ನ ತತ್ವಗಳನ್ನು ಹೊಂದಿದ್ದರೂ ಜನರ ಹಿತಾಸಕ್ತಿಯ ವಿಚಾರದಲ್ಲಿ ಎಲ್ಲರೂ ಒಗ್ಗಟ್ಟಿನಿಂದ ಕೆಲಸ ಮಾಡಬೇಕೆಂದು ಕರೆ ನೀಡಿದರು. "ಸದನದಲ್ಲಿ ನಾವು ಬೇರೆ ಬೇರೆ ಆಸನಗಳಲ್ಲಿ ಕುಳಿತಿರಬಹುದು. ನಮ್ಮ ರಾಜಕೀಯ ಭಿನ್ನಾಭಿಪ್ರಾಯಗಳು ಇರಬಹುದು. ಆದರೆ ತಮಿಳುನಾಡಿನ ಅಭಿವೃದ್ಧಿ, ಜನರ ಕಲ್ಯಾಣ ಮತ್ತು ರಾಜ್ಯದ ಭವಿಷ್ಯದ ವಿಚಾರ ಬಂದಾಗ ಎಲ್ಲರೂ ಒಂದೇ ಮನಸ್ಸಿನಿಂದ ಕೆಲಸ ಮಾಡಬೇಕು," ಎಂದು ಅವರು ಹೇಳಿದರು.

ರಾಜ್ಯದಲ್ಲಿ ಹೊಸ ಸರ್ಕಾರ ರಚನೆಯಾದ ಹಿನ್ನೆಲೆ ನೂತನ ಮುಖ್ಯಮಂತ್ರಿ ವಿಜಯ್ ಅವರಿಗೆ ಉದಯನಿಧಿ ಅಭಿನಂದನೆ ಸಲ್ಲಿಸಿದರು. ತಮಿಳುನಾಡಿನ ರಾಜಕೀಯದಲ್ಲಿ ಪರಸ್ಪರ ಗೌರವ, ಸೌಹಾರ್ದತೆ ಮತ್ತು ಆರೋಗ್ಯಕರ ಚರ್ಚೆಯ ಸಂಸ್ಕೃತಿ ಮುಂದುವರಿಯಬೇಕು ಎಂಬ ಆಶಯ ವ್ಯಕ್ತಪಡಿಸಿದ ಅವರು, ಆಡಳಿತ ಪಕ್ಷ ಮತ್ತು ವಿರೋಧ ಪಕ್ಷಗಳು ಪರಸ್ಪರ ಶತ್ರುಗಳಲ್ಲ, ಬದಲಾಗಿ ಜನರ ಪರವಾಗಿ ಕೆಲಸ ಮಾಡುವ ಎರಡು ವಿಭಿನ್ನ ರಾಜಕೀಯ ಶಕ್ತಿಗಳೆಂದು ಹೇಳಿದರು. ಜನಹಿತದ ವಿಚಾರಗಳಲ್ಲಿ ಸರ್ಕಾರಕ್ಕೆ ಬೇಕಾದ ಬೆಂಬಲ ನೀಡಲು ವಿರೋಧ ಪಕ್ಷ ಸಿದ್ಧವಿದೆ ಎಂಬ ಸಂದೇಶವನ್ನೂ ಅವರು ನೀಡಿದರು.

ಆದರೆ ಇದೇ ಭಾಷಣದಲ್ಲಿ ಉದಯನಿಧಿ ಸ್ಟಾಲಿನ್ ಮತ್ತೆ ಸನಾತನ ಧರ್ಮದ ವಿಚಾರವನ್ನು ಪ್ರಸ್ತಾಪಿಸಿ ತಮ್ಮ ತೀಕ್ಷ್ಣ ಅಭಿಪ್ರಾಯ ವ್ಯಕ್ತಪಡಿಸಿದರು. "ಸಮಾಜದಲ್ಲಿ ಜಾತಿ ವ್ಯವಸ್ಥೆ, ಅಸಮಾನತೆ ಮತ್ತು ದ್ವೇಷವನ್ನು ಉಳಿಸಿಕೊಂಡು ಹೋಗುವ ಯಾವುದೇ ಚಿಂತನೆಗೆ ಅವಕಾಶ ಇರಬಾರದು. ಸನಾತನ ಧರ್ಮ ಎಂಬ ಹೆಸರಿನಲ್ಲಿ ಕೆಲವೊಂದು ಸಾಮಾಜಿಕ ಅನ್ಯಾಯಗಳು ಇಂದಿಗೂ ಮುಂದುವರಿಯುತ್ತಿವೆ. ಜನರನ್ನು ಒಂದಾಗಿಸುವ ಬದಲು ಬೇರ್ಪಡಿಸುವ ಚಿಂತನೆಗೆ ಅಂತ್ಯ ಬರಬೇಕು," ಎಂದು ಅವರು ಟೀಕಿಸಿದರು. ಈ ಹೇಳಿಕೆ ಹೊರಬಿದ್ದ ಕೂಡಲೇ ರಾಜಕೀಯ ವಲಯದಲ್ಲಿ ಪರ-ವಿರೋಧ ಚರ್ಚೆಗಳು ಮತ್ತಷ್ಟು ತೀವ್ರಗೊಂಡಿವೆ.

ಇದರ ಜೊತೆಗೆ ಮುಖ್ಯಮಂತ್ರಿ ಪ್ರಮಾಣವಚನ ಸಮಾರಂಭದಲ್ಲಿ ನಡೆದ ಶಿಷ್ಟಾಚಾರದ ವಿಚಾರದಲ್ಲೂ ಉದಯನಿಧಿ ಅಸಮಾಧಾನ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ಮೊದಲು ರಾಷ್ಟ್ರಗೀತೆ ಮತ್ತು ವಂದೇ ಮಾತರಂ ಹಾಡಿದ ಬಳಿಕ ತಮಿಳುನಾಡಿನ ನಾಡಗೀತೆ ಹಾಡಿರುವುದನ್ನು ಪ್ರಶ್ನಿಸಿದ ಅವರು, ರಾಜ್ಯದ ಸಾಂಸ್ಕೃತಿಕ ಗೌರವ ಮತ್ತು ಪರಂಪರೆಗೆ ಹೆಚ್ಚಿನ ಪ್ರಾಮುಖ್ಯತೆ ನೀಡಬೇಕೆಂದು ಅಭಿಪ್ರಾಯಪಟ್ಟರು.

"ತಮಿಳುನಾಡಿನ ನಾಡಗೀತೆಗೆ ಅತ್ಯುನ್ನತ ಗೌರವ ಸಿಗಬೇಕು. ಮುಂದಿನ ದಿನಗಳಲ್ಲಿ ಅದನ್ನು ಎರಡನೇ ಸ್ಥಾನಕ್ಕೆ ತಳ್ಳುವಂತಹ ಪರಿಸ್ಥಿತಿ ನಿರ್ಮಾಣವಾಗದಂತೆ ಸರ್ಕಾರ ಎಚ್ಚರಿಕೆ ವಹಿಸಬೇಕು," ಎಂದು ಸಲಹೆ ನೀಡಿದರು.

ಉದಯನಿಧಿ ಸ್ಟಾಲಿನ್ ಅವರ ಈ ಹೇಳಿಕೆಗಳು ತಮಿಳುನಾಡಿನ ರಾಜಕೀಯದಲ್ಲಿ ಮತ್ತೊಮ್ಮೆ ದೊಡ್ಡ ಚರ್ಚೆಗೆ ಕಾರಣವಾಗಿದ್ದು, ಡಿಎಂಕೆ ಮತ್ತು ಇತರ ಪಕ್ಷಗಳ ನಡುವಿನ ವಾಕ್ಸಮರಕ್ಕೂ ವೇದಿಕೆ ಸಿದ್ಧವಾಗಿದೆ. ಒಂದೆಡೆ ಸಾಮಾಜಿಕ ನ್ಯಾಯದ ಹೆಸರಿನಲ್ಲಿ ಅವರ ಅಭಿಪ್ರಾಯಕ್ಕೆ ಬೆಂಬಲ ವ್ಯಕ್ತವಾಗುತ್ತಿದ್ದರೆ, ಮತ್ತೊಂದೆಡೆ ಧಾರ್ಮಿಕ ಭಾವನೆಗಳಿಗೆ ಧಕ್ಕೆ ತರುವ ಹೇಳಿಕೆ ಎಂದು ವಿರೋಧ ಪಕ್ಷಗಳು ತೀವ್ರ ಆಕ್ಷೇಪ ವ್ಯಕ್ತಪಡಿಸುತ್ತಿವೆ.

ಸರ್ಕಾರಿ ಕಚೇರಿಗೆ ಕತ್ತಲೆ ಭಾಗ್ಯ-ವಿದ್ಯುತ್ ಇಲ್ಲ, ಕಂಪ್ಯೂಟರ್ ಇಲ್ಲ: ಸಾರ್ವಜನಿಕರ ಆಕ್ರೋಶ

ಗದಗ: ರಾಜ್ಯ ಸರ್ಕಾರ ಗೃಹ ಜ್ಯೋತಿ ಯೋಜನೆಯಡಿ ಮನೆಗಳಿಗೆ ಉಚಿತ ವಿದ್ಯುತ್ ನೀಡುತ್ತಿರುವುದಾಗಿ ಹೇಳಿಕೊಂಡು ಜನರಿಗೆ ದೊಡ್ಡ ಮಟ್ಟದಲ್ಲಿ ನೆರವಾಗುತ್ತಿದ್ದೇವೆ ಎಂದು ಪ್ರಚಾರ ಮಾಡುತ್ತಿದೆ. ಲಕ್ಷಾಂತರ ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳಿಗೆ ಈ ಯೋಜನೆಯಿಂದ ಲಾಭವಾಗಿದೆ ಎಂದು ಸರ್ಕಾರ ಹೆಮ್ಮೆಪಡುತ್ತಿರುವ ಸಂದರ್ಭದಲ್ಲೇ, ಸರ್ಕಾರದ ಅಧೀನದಲ್ಲೇ ಕಾರ್ಯನಿರ್ವಹಿಸುವ ಗದಗ ಜಿಲ್ಲೆಯ ಕಚೇರಿಯೊಂದು ಕಳೆದ ಎಂಟು ತಿಂಗಳಿನಿಂದ ವಿದ್ಯುತ್ ಸಂಪರ್ಕವಿಲ್ಲದೆ ಕತ್ತಲೆಯಲ್ಲೇ ಕಾರ್ಯನಿರ್ವಹಿಸುತ್ತಿರುವ ಸಂಗತಿ ಇದೀಗ ಬೆಳಕಿಗೆ ಬಂದಿದೆ. ವಿದ್ಯುತ್ ಬಿಲ್ ಪಾವತಿಸದೇ ಇರುವ ಕಾರಣ ಹೆಸ್ಕಾಂ ಅಧಿಕಾರಿಗಳು ಕಚೇರಿಯ ವಿದ್ಯುತ್ ಸಂಪರ್ಕವನ್ನು ಕಡಿತಗೊಳಿಸಿದ್ದು, ಸಿಬ್ಬಂದಿ ಹಾಗೂ ಸಾರ್ವಜನಿಕರು ಮೊಬೈಲ್ ಟಾರ್ಚ್ ಬೆಳಕಿನಲ್ಲೇ ತಮ್ಮ ಕೆಲಸಗಳನ್ನು ನಡೆಸಬೇಕಾದ ದುಸ್ಥಿತಿ ಎದುರಾಗಿದೆ.

ಗದಗ ಜಿಲ್ಲೆಯ ಲಕ್ಷೇಶ್ವರ ಪಟ್ಟಣದಲ್ಲಿರುವ ಭೂದಾಖಲೆ ಮತ್ತು ನಗರ ಸರ್ವೇ ಕಚೇರಿಗೆ ಸುಮಾರು 3,000 ರೂಪಾಯಿ ವಿದ್ಯುತ್ ಬಿಲ್ ಬಾಕಿ ಉಳಿದಿದ್ದ ಹಿನ್ನೆಲೆಯಲ್ಲಿ ಹೆಸ್ಕಾಂ ವಿದ್ಯುತ್ ಸಂಪರ್ಕವನ್ನು ಕಡಿತಗೊಳಿಸಿದೆ. ಅಧಿಕಾರಿಗಳ ಪ್ರಕಾರ, ಸುಮಾರು ಎಂಟು ತಿಂಗಳ ಹಿಂದೆ ಸಂಪರ್ಕ ಕಡಿತಗೊಂಡಿದ್ದು, ಇದುವರೆಗೆ ಅದನ್ನು ಮರುಸ್ಥಾಪಿಸಲು ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ. ಪರಿಣಾಮವಾಗಿ ಕಚೇರಿಯ ದಿನನಿತ್ಯದ ಆಡಳಿತ ಕಾರ್ಯಗಳು ತೀವ್ರ ಅಸ್ತವ್ಯಸ್ತಗೊಂಡಿವೆ. ಬೆಳಕು ಇಲ್ಲದ ಪರಿಸ್ಥಿತಿಯಲ್ಲಿ ಸಿಬ್ಬಂದಿ ಕೆಲಸ ಮಾಡಬೇಕಾಗಿದ್ದು, ಸಾರ್ವಜನಿಕರು ತಮ್ಮ ದಾಖಲೆ ಸಂಬಂಧಿತ ಕೆಲಸಗಳಿಗೆ ಗಂಟೆಗಳ ಕಾಲ ಕತ್ತಲೆಯಲ್ಲೇ ಕಾಯುವ ಪರಿಸ್ಥಿತಿ ನಿರ್ಮಾಣವಾಗಿದೆ.

ತಾಲೂಕು ಕೇಂದ್ರವಾಗಿ ವೇಗವಾಗಿ ಅಭಿವೃದ್ಧಿ ಹೊಂದುತ್ತಿರುವ ಲಕ್ಷೇಶ್ವರ ಪಟ್ಟಣದಲ್ಲಿ ಇಂತಹ ಮೂಲಭೂತ ಸೌಲಭ್ಯಗಳ ಕೊರತೆ ಕಂಡುಬರುತ್ತಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ. ಸರ್ಕಾರ ಡಿಜಿಟಲ್ ಇಂಡಿಯಾ, ಇ-ಆಡಳಿತ, ಭೂದಾಖಲೆಗಳ ಡಿಜಿಟಲೀಕರಣ ಸೇರಿದಂತೆ ಹಲವು ಆಧುನಿಕ ಯೋಜನೆಗಳ ಬಗ್ಗೆ ಘೋಷಣೆ ಮಾಡುತ್ತಿದ್ದರೂ, ವಾಸ್ತವದಲ್ಲಿ ಕಚೇರಿಯ ಸ್ಥಿತಿ ದಯನೀಯವಾಗಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ. ಕಚೇರಿಯಲ್ಲಿ ಸಮರ್ಪಕ ಕಂಪ್ಯೂಟರ್ ವ್ಯವಸ್ಥೆ, ಇಂಟರ್‌ನೆಟ್ ಸೌಲಭ್ಯ ಅಥವಾ ಡಿಜಿಟಲ್ ದಾಖಲೆ ನಿರ್ವಹಣಾ ವ್ಯವಸ್ಥೆಯೇ ಇಲ್ಲದ ಕಾರಣ, ಇನ್ನೂ ಕೈಬರಹದ ನಕ್ಷೆಗಳು ಹಾಗೂ ಹಳೆಯ ದಾಖಲೆಗಳನ್ನೇ ಬಳಸಲಾಗುತ್ತಿದೆ ಎಂದು ಸಾರ್ವಜನಿಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ಕಚೇರಿಯಲ್ಲಿ ಜಮೀನು ಹಾಗೂ ಆಸ್ತಿ ಅಳತೆ, ಗಡಿ ಗುರುತು ನಿರ್ಧಾರ, ಸರ್ವೇ ನಕ್ಷೆ ತಯಾರಿ, ಹಳೆಯ ಸರ್ವೇ ದಾಖಲೆಗಳ ನಿರ್ವಹಣೆ, ಸರ್ವೇ ನಂಬರ್ ವಿಭಜನೆ, ಆಸ್ತಿ ಕಾರ್ಡ್ ನೀಡುವುದು ಸೇರಿದಂತೆ ಅನೇಕ ಮಹತ್ವದ ಕೆಲಸಗಳು ನಡೆಯುತ್ತವೆ. ನಗರ ಪ್ರದೇಶಗಳ ಖಾಸಗಿ ಮತ್ತು ಸರ್ಕಾರಿ ಜಮೀನುಗಳ ಅಳತೆ ಹಾಗೂ ದಾಖಲಾತಿ ಕಾರ್ಯಗಳೂ ಇದೇ ಕಚೇರಿಯ ಜವಾಬ್ದಾರಿಯಲ್ಲಿವೆ. ಆದರೆ ಸಿಬ್ಬಂದಿ ಕೊರತೆ ಮತ್ತು ಮೂಲ ಸೌಲಭ್ಯಗಳ ಅಭಾವದಿಂದ ಕೆಲಸಗಳ ವೇಗ ಕುಂಠಿತಗೊಂಡಿದ್ದು, ಸಾರ್ವಜನಿಕರಿಗೆ ತಿಂಗಳುಗಳ ಕಾಲ ಕಾಯಬೇಕಾದ ಪರಿಸ್ಥಿತಿ ಉಂಟಾಗಿದೆ ಎಂದು ಹೇಳಲಾಗುತ್ತಿದೆ.

ಮತ್ತೊಂದೆಡೆ, ಕಚೇರಿಯ ಸಂಪೂರ್ಣ ಕಾರ್ಯವನ್ನು ಕೇವಲ ಇಬ್ಬರು ಸಿಬ್ಬಂದಿಯೇ ನಿರ್ವಹಿಸುತ್ತಿದ್ದಾರೆ ಎಂಬ ಆರೋಪವೂ ಕೇಳಬಂದಿದೆ. ವಿದ್ಯುತ್ ಇಲ್ಲದ ಕಾರಣ ಕಂಪ್ಯೂಟರ್ ಬಳಸಲು ಸಾಧ್ಯವಾಗುತ್ತಿಲ್ಲ. ಇದರಿಂದ ಸಿಬ್ಬಂದಿ ತಮ್ಮ ವೈಯಕ್ತಿಕ ಮೊಬೈಲ್‌ಗಳ ಮೂಲಕವೇ ಅರ್ಜಿಗಳನ್ನು ಪರಿಶೀಲಿಸಿ, ಸರ್ವೇ ಮಾಹಿತಿ ಹಾಗೂ ನಕ್ಷೆಗಳನ್ನು ವೀಕ್ಷಿಸಿ ಕೆಲಸ ನಿರ್ವಹಿಸಬೇಕಾದ ಪರಿಸ್ಥಿತಿ ಎದುರಾಗಿದೆ ಎಂದು ಮೂಲಗಳು ತಿಳಿಸಿವೆ. ದಿನದ ಹೊತ್ತಲ್ಲಿಯೂ ಕಚೇರಿಯ ಒಳಭಾಗ ಕತ್ತಲೆಯಿಂದ ಕೂಡಿದ್ದು, ಸಾರ್ವಜನಿಕರಿಗೆ ಅಗತ್ಯ ದಾಖಲೆಗಳನ್ನು ಪಡೆಯಲು ತುಂಬಾ ಕಷ್ಟವಾಗುತ್ತಿದೆ.

ಸ್ಥಳೀಯರು ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ತಕ್ಷಣ ಪರಿಹಾರ ಕಂಡುಹಿಡಿಯಬೇಕೆಂದು ಜಿಲ್ಲಾಡಳಿತವನ್ನು ಆಗ್ರಹಿಸಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿಗೆ ಭೇಟಿ ನೀಡಿರುವ ಸಾರ್ವಜನಿಕರು, ವಿದ್ಯುತ್ ಸಂಪರ್ಕವನ್ನು ಕೂಡಲೇ ಮರುಸ್ಥಾಪಿಸಿ ಕಚೇರಿಗೆ ಅಗತ್ಯ ಮೂಲ ಸೌಲಭ್ಯಗಳನ್ನು ಒದಗಿಸಬೇಕು ಎಂದು ಮನವಿ ಮಾಡಿದ್ದಾರೆ. ಸರ್ಕಾರದ ವಿವಿಧ ಯೋಜನೆಗಳ ಕುರಿತು ಜಾಹೀರಾತು ನೀಡುವುದಕ್ಕಿಂತ ಮೊದಲು ಸರ್ಕಾರಿ ಕಚೇರಿಗಳಲ್ಲಿನ ಮೂಲಭೂತ ಸಮಸ್ಯೆಗಳನ್ನು ಪರಿಹರಿಸುವುದು ಅಗತ್ಯ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಈ ಕುರಿತ ಮಾಹಿತಿ ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್ ವರದಿಯಲ್ಲಿ ಪ್ರಕಟವಾಗಿದೆ.

ಜಿಂದಾಲ್‌ನಿಂದ ಕೋಟಿ ಕೋಟಿ ತೆರಿಗೆ ಬಾಕಿ; ವಸೂಲಿಗೆ ಸ್ಥಳೀಯ ಆಡಳಿತ ಸರ್ಕಸ್

ಬಳ್ಳಾರಿ: ಸಂಡೂರು ತಾಲೂಕಿನ ತೋರಣಗಲ್ ಪ್ರದೇಶದಲ್ಲಿ ಸ್ಥಾಪನೆ ಯಾಗಿರುವ ದೇಶದ ಎರಡನೇ ಅತಿ-ದೊಡ್ಡ ಖಾಸಗಿ ಉಕ್ಕು ಉತ್ಪಾದಕ ಕಂಪನಿಗಳಲ್ಲೊಂದು ಆಗಿರುವ ಎಖಫ ಜಿಂದಾಲ್ ಕಂಪನಿ, ಕಳೆದ ಹಲವು ವರ್ಷಗಳಿಂದ ಕೋಟ್ಯಂತರ ರೂಪಾಯಿ ಆಸ್ತಿ ಹಾಗೂ ಅಭಿವೃದ್ಧಿ ತೆರಿಗೆಯನ್ನು ಪಾವತಿಸದೇ ಬಾಕಿ ಉಳಿಸಿಕೊಂಡಿರುವ ಸಂಗತಿ ಇದೀಗ ಮತ್ತೆ ಚರ್ಚೆಗೆ ಗ್ರಾಸವಾಗಿದೆ. 2018ರಿಂದಲೇ ತೋರಣಗಲ್ಲು, ವಡ್ಡು ಮತ್ತು ಬನ್ನಿಹಟ್ಟಿ ಗ್ರಾಮ ಪಂಚಾಯಿತಿಗಳಿಗೆ ಪಾವತಿಸಬೇಕಿರುವ ತೆರಿಗೆ ಮೊತ್ತ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಒಟ್ಟು ಬಾಕಿ ಸುಮಾರು 20 ಕೋಟಿ ರೂಪಾಯಿಗೂ ಅಧಿಕವಾಗಿದೆ ಎಂದು ತಿಳಿದುಬಂದಿದೆ. ಹಲವು ಬಾರಿ ನೋಟಿಸ್ ನೀಡಿದರೂ ಕಂಪನಿ ಯಾವುದೇ ಸ್ಪಂದನೆ ನೀಡದೆ ನಿರ್ಲಕ್ಷ್ಯ ಧೋರಣೆ ತಾಳಿರುವುದು ಸ್ಥಳೀಯ ಆಡಳಿತ ಸಂಸ್ಥೆಗಳ ಅಸಮಾಧಾನಕ್ಕೆ ಕಾರಣವಾಗಿದೆ.

ತೋರಣಗಲ್ಲು, ವಡ್ಡು ಹಾಗೂ ಬನ್ನಿಹಟ್ಟಿ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಜಿಂದಾಲ್ ಕಂಪನಿಯ ವಿವಿಧ ಕೈಗಾರಿಕಾ ಘಟಕಗಳು, ಕಾರ್ಖಾನೆಗಳು, ಗೋದಾಮುಗಳು ಹಾಗೂ ಸಂಬಂಧಿತ ಮೂಲಸೌಕರ್ಯಗಳು ಕಾರ್ಯ ನಿರ್ವಹಿಸುತ್ತಿವೆ. ಆದರೆ ಇಷ್ಟೊಂದು ದೊಡ್ಡ ಮಟ್ಟದಲ್ಲಿ ಕೈಗಾರಿಕೆಗಳನ್ನು ನಡೆಸುತ್ತಿದ್ದರೂ ಗ್ರಾಮ ಪಂಚಾಯಿತಿಗಳಿಗೆ ಪಾವತಿಸಬೇಕಿರುವ ತೆರಿಗೆ ಮಾತ್ರ ಹಲವು ವರ್ಷಗಳಿಂದ ಬಾಕಿಯೇ ಉಳಿದಿದೆ ಎಂದು ಅಧಿಕಾರಿಗಳು ಆರೋಪಿಸಿದ್ದಾರೆ. ಸ್ಥಳೀಯ ಸಂಸ್ಥೆಗಳು ತೆರಿಗೆ ವಸೂಲಿಗಾಗಿ ಅನೇಕ ಬಾರಿ ನೋಟಿಸ್ ಜಾರಿಗೊಳಿಸಿದರೂ, ಕಂಪನಿಯಿಂದ ಸ್ಪಷ್ಟ ಪ್ರತಿಕ್ರಿಯೆ ಸಿಗುತ್ತಿಲ್ಲ ಎನ್ನಲಾಗಿದೆ.

ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಲಭ್ಯವಿರುವ ಮಾಹಿತಿಯ ಪ್ರಕಾರ, ತೋರಣಗಲ್ಲು ಗ್ರಾಮ ಪಂಚಾಯಿತಿಗೆ 2018-19ರಿಂದ ಇಂದಿನವರೆಗೂ ಸುಮಾರು 20,23,94,216 ರೂಪಾಯಿ ತೆರಿಗೆ ಬಾಕಿಯಿದೆ. ಇದೇ ರೀತಿಯಾಗಿ ಬನ್ನಿಹಟ್ಟಿ ಗ್ರಾಮ ಪಂಚಾಯಿತಿಗೆ 2024-25ರಿಂದ 2025-26ರವರೆಗೆ ಸುಮಾರು 60,53,036 ರೂಪಾಯಿ ತೆರಿಗೆ ಪಾವತಿಯಾಗಿಲ್ಲ. ವಡ್ಡು ಗ್ರಾಮ ಪಂಚಾಯಿತಿಯಲ್ಲಿಯೂ 2018-19ರಿಂದ 2025-26ರವರೆಗೆ ಕೋಟ್ಯಂತರ ರೂಪಾಯಿ ತೆರಿಗೆ ಬಾಕಿ ಉಳಿದಿದೆ ಎಂದು ಹೇಳಲಾಗಿದೆ. ಇಷ್ಟು ದೊಡ್ಡ ಮೊತ್ತ ಬಾಕಿ ಉಳಿದಿರುವುದರಿಂದ ಗ್ರಾಮ ಪಂಚಾಯಿತಿಗಳ ಆರ್ಥಿಕ ಪರಿಸ್ಥಿತಿಯ ಮೇಲೂ ಪರಿಣಾಮ ಬೀರಿದೆ ಎಂಬ ಮಾತು ಕೇಳಬರುತ್ತಿದೆ.

ಸ್ಥಳೀಯ ಆಡಳಿತ ಸಂಸ್ಥೆಗಳು ಹಲವು ಬಾರಿ ತೆರಿಗೆ ಪಾವತಿಸುವಂತೆ ಮನವಿ ಮಾಡಿದ್ದರೂ ಯಾವುದೇ ಪ್ರಯೋಜನ ವಾಗಿಲ್ಲ. ಗ್ರಾಮ ಪಂಚಾಯಿತಿ ಅಧಿಕಾರಿಗಳು ನೋಟಿಸ್ ಜಾರಿ, ಸಭೆ, ಕಾನೂನು ಪ್ರಕ್ರಿಯೆ ಸೇರಿದಂತೆ ಹಲವು ಕ್ರಮಗಳನ್ನು ಕೈಗೊಂಡರೂ ಕಂಪನಿಯಿಂದ ಸಮರ್ಪಕ ಸ್ಪಂದನೆ ಸಿಗುತ್ತಿಲ್ಲ ಎನ್ನಲಾಗಿದೆ. ಇದರಿಂದ ತೆರಿಗೆ ವಸೂಲಿ ಮಾಡುವುದು ಪಂಚಾಯಿತಿಗಳಿಗೆ ದೊಡ್ಡ ಸವಾಲಾಗಿ ಪರಿಣಮಿಸಿದೆ.

1994ರಲ್ಲಿ ವಿಜಯನಗರ ಸ್ಟೀಲ್ ಲಿಮಿಟೆಡ್ ಹೆಸರಿನಲ್ಲಿ ಆರಂಭವಾದ ಈ ಕೈಗಾರಿಕಾ ಸಂಸ್ಥೆ, ಬಳಿಕ ಎಖಫ ಜಿಂದಾಲ್ ಆಗಿ ವಿಸ್ತಾರಗೊಂಡು ದೇಶದ ಪ್ರಮುಖ ಉಕ್ಕು ಉತ್ಪಾದನಾ ಕಂಪನಿಗಳಲ್ಲಿ ಒಂದಾಗಿ ಬೆಳೆದಿದೆ. ಸಾವಿರಾರು ಎಕರೆ ಪ್ರದೇಶದಲ್ಲಿ ಕಬ್ಬಿಣ, ಉಕ್ಕು, ಸಿಮೆಂಟ್, ವೇಂಟ್ ಸೇರಿದಂತೆ ವಿವಿಧ ಕೈಗಾರಿಕಾ ಘಟಕಗಳನ್ನು ಹೊಂದಿರುವ ಕಂಪನಿ, ಸಾವಿರಾರು ಜನರಿಗೆ ನೇರ ಮತ್ತು ಪರೋಕ್ಷ ಉದ್ಯೋಗ ನೀಡುತ್ತಿದೆ. ಆದರೆ ಇಷ್ಟೊಂದು ದೊಡ್ಡ ಮಟ್ಟದ ಕೈಗಾರಿಕೆ ನಡೆಸುತ್ತಿರುವ ಕಂಪನಿಯೇ ಸ್ಥಳೀಯ ಸಂಸ್ಥೆಗಳಿಗೆ ತೆರಿಗೆ ಪಾವತಿಸದೇ ಇರುವುದು ಸಾರ್ವಜನಿಕ ವಲಯದಲ್ಲಿ ಪ್ರಶ್ನೆಗಳಿಗೆ ಕಾರಣವಾಗಿದೆ.

ಈ ವಿಚಾರವಾಗಿ ತೀವ್ರ ಆಕ್ರೋಶ ವ್ಯಕ್ತಪಡಿಸಿರುವ ಬಳ್ಳಾರಿ ನಗರ ಶಾಸಕ ಭರತ್ ರೆಡ್ಡಿ, ಕಂಪನಿಯ ಕಾರ್ಯವೈಖರಿಯನ್ನು ಪ್ರಶ್ನಿಸಿದ್ದಾರೆ. "ಸ್ಥಳೀಯರಿಗೆ ಸಮರ್ಪಕ ಉದ್ಯೋಗ ನೀಡುತ್ತಿಲ್ಲ ಎಂಬ ಆರೋಪಗಳು ಈಗಾಗಲೇ ಕೇಳಿಬರುತ್ತಿವೆ. ಅದರ ಜೊತೆಗೆ ಸ್ಥಳೀಯ ಗ್ರಾಮ ಪಂಚಾಯಿತಿಗಳಿಗೆ ಪಾವತಿಸಬೇಕಿರುವ ತೆರಿಗೆಯನ್ನೂ ನೀಡದೇ ಇದ್ದರೆ ಹೇಗೆ?" ಎಂದು ಅವರು ಪ್ರಶ್ನಿಸಿದ್ದಾರೆ. ಎಖಫ ಕಂಪನಿಯ ಈ ನಿರ್ಲಕ್ಷ್ಯ ಧೋರಣೆಯನ್ನು ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿಗಳ ಗಮನಕ್ಕೆ ತರಲಾಗುವುದು ಎಂದು ಶ

ತರಕಾರಿ ಮಾರುವವರ ವೇಷದಲ್ಲಿ ಬಂದು ಮನೆಗಳಿಗೆ ಕನ್ನ ಹಾಕಿದ ಗ್ಯಾಂಗ್ ಅರೆಸ್ಟ್

ಬೆಳಗಾವಿ: ತರಕಾರಿ ಮಾರುವವರ ವೇಷದಲ್ಲಿ ವಿವಿಧ ಬಡಾವಣೆಗಳು ಮತ್ತು ನಿವಾಸಿ ಪ್ರದೇಶಗಳಲ್ಲಿ ಸುತ್ತಾಡಿ ಮನೆಗಳ ಮಾಹಿತಿ ಕಲೆಹಾಕಿ, ಬಳಿಕ ರಾತ್ರಿ ವೇಳೆ ಮನೆ ಬೀಗ ಮುರಿದು ಕಳ್ಳತನ ಮಾಡುತ್ತಿದ್ದ ಖತರ್ನಾಕ್ ಕಳ್ಳರ ಗ್ಯಾಂಗ್‌ನ್ನು ಬೆಳಗಾವಿ ಪೊಲೀಸರು ಭೇದಿಸುವಲ್ಲಿ ಯಶಸ್ವಿಯಾಗಿದ್ದಾರೆ. ಪ್ರತ್ಯೇಕ ಮನೆ ಕಳ್ಳತನ ಪ್ರಕರಣಗಳಿಗೆ ಸಂಬಂಧಿಸಿದಂತೆ ಹಲವು ಆರೋಪಿಗಳನ್ನು ಬಂಧಿಸಿರುವ ಪೊಲೀಸರು, ಅವರಿಂದ ಲಕ್ಷಾಂತರ ರೂಪಾಯಿ ಮೌಲ್ಯದ ಚಿನ್ನಾಭರಣ, ಬೆಳ್ಳಿ ಸಾಮಗ್ರಿಗಳು, ಬೈಕ್‌ಗಳು ಮತ್ತು ಮೊಬೈಲ್ ಫೋನ್‌ಗಳನ್ನು ವಶಕ್ಕೆ ಪಡೆದಿದ್ದಾರೆ. ಬಂಧಿತರು ಉತ್ತರ ಪ್ರದೇಶ ಹಾಗೂ ಮಹಾರಾಷ್ಟ್ರ ಮೂಲದವರು ಎಂಬುದು ತನಿಖೆ ವೇಳೆ ಬೆಳಕಿಗೆ ಬಂದಿದೆ.

ಪೊಲೀಸರ ಮಾಹಿತಿ ಪ್ರಕಾರ, ಆರೋಪಿಗಳು ಮೊದಲು ತರಕಾರಿ ಮಾರುವವರಂತೆ ಮನೆ ಮನೆಗೆ ತೆರಳಿ ಪ್ರದೇಶಗಳ ಬಗ್ಗೆ ಮಾಹಿತಿ ಸಂಗ್ರಹಿಸುತ್ತಿದ್ದರು. ಈ ವೇಳೆ ಯಾವ ಮನೆಗಳಲ್ಲಿ ಜನರು ಇರುವುದಿಲ್ಲ, ಯಾವ ಮನೆಗಳಿಗೆ ಬೀಗ ಹಾಕಲಾಗಿದೆ, ಯಾರು ಹೊರ ಊರಿಗೆ ತೆರಳಿದ್ದಾರೆ ಎಂಬುದನ್ನು ನಿಗಾದಲ್ಲಿಟ್ಟುಕೊಳ್ಳುತ್ತಿದ್ದರು. ದಿನದ ಹೊತ್ತಿನಲ್ಲಿ ಅನುಮಾನ ಬಾರದಂತೆ ತರಕಾರಿ ಮಾರಾಟ ಮಾಡುವ ನೆಪದಲ್ಲಿ ಓಡಾಡುತ್ತಿದ್ದ ಗ್ಯಾಂಗ್ ಸದಸ್ಯರು, ರಾತ್ರಿ ವೇಳೆಗೆ ಗುಂಪು ಕಟ್ಟಿಕೊಂಡು ಬಂದು ಆಯ್ಕೆ ಮಾಡಿಕೊಂಡ ಮನೆಗಳ ಬೀಗ ಮುರಿದು ಕಳ್ಳತನ ನಡೆಸಿ ಪರಾರಿಯಾಗುತ್ತಿದ್ದರು.

ಈ ಕುರಿತು ಬೆಳಗಾವಿಯ ಎಪಿಎಂಸಿ ಹಾಗೂ ಶಹಾಪುರ ಪೊಲೀಸ್ ಠಾಣೆಗಳಲ್ಲಿ ಪ್ರತ್ಯೇಕ ಪ್ರಕರಣಗಳು ದಾಖಲಾಗಿದ್ದವು. ಒಂದೇ ಮಾದರಿಯಲ್ಲಿ ಕಳ್ಳತನಗಳು ನಡೆಯುತ್ತಿರುವ ಹಿನ್ನೆಲೆಯಲ್ಲಿ ಪೊಲೀಸರು ತನಿಖೆಯನ್ನು ಗಂಭೀರವಾಗಿ ಪರಿಗಣಿಸಿ ಆರೋಪಿಗಳ ಪತ್ತೆಗೆ ವಿಶೇಷ ಕಾರ್ಯಾಚರಣೆ ಆರಂಭಿಸಿದ್ದರು. ಇದಕ್ಕಾಗಿ ಎರಡು ಪ್ರತ್ಯೇಕ ಪೊಲೀಸ್ ತಂಡಗಳನ್ನು ರಚಿಸಿ ವಿವಿಧ ಜಿಲ್ಲೆಗಳು ಹಾಗೂ ರಾಜ್ಯಗಳಲ್ಲಿ ಮಾಹಿತಿ ಸಂಗ್ರಹಿಸುವ ಕಾರ್ಯ ಕೈಗೊಳ್ಳಲಾಗಿತ್ತು.

ಎಪಿಎಂಸಿ ಠಾಣಾ ವ್ಯಾಪ್ತಿಯಲ್ಲಿ ನಡೆದ ಮನೆ ಕಳ್ಳತನ ಪ್ರಕರಣದ ತನಿಖೆ ವೇಳೆ ಮಹಾರಾಷ್ಟ್ರ ಮೂಲದ ದೇವೇಂದ್ರ ವಾಘಮೋರೆ, ಸಚಿನ್ ಗೌಳಿ ಮತ್ತು ಕಪಿಲ್ ಜಾಧವ್ ಎಂಬ ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ. ಬಂಧಿತರಿಂದ ಸುಮಾರು 4.71 ಲಕ್ಷ ರೂಪಾಯಿ ಮೌಲ್ಯದ ಚಿನ್ನಾಭರಣ, ಬೆಳ್ಳಿ ಸಾಮಗ್ರಿಗಳು, ಎರಡು ಬೈಕ್‌ಗಳು ಹಾಗೂ ಮೊಬೈಲ್ ಫೋನ್‌ಗಳನ್ನು ಜಪ್ತಿ ಮಾಡಲಾಗಿದೆ. ಆರೋಪಿಗಳು ಹಲವು ಮನೆಗಳಲ್ಲಿ ಕಳ್ಳತನ ನಡೆಸಿರುವುದಾಗಿ ಪ್ರಾಥಮಿಕ ತನಿಖೆಯಲ್ಲಿ ಒಪ್ಪಿಕೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಇನ್ನು ಶಹಾಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದ ಮತ್ತೊಂದು ಕಳ್ಳತನ ಪ್ರಕರಣದಲ್ಲಿ ಖತರ್ನಾಕ್ ಗ್ಯಾಂಗ್‌ನ ಕಿಂಗ್‌ಪಿನ್ ಎಂದೇ ಗುರುತಿಸಲ್ಪಟ್ಟಿದ್ದ ಆರೋಪಿಯನ್ನು ಪೊಲೀಸರು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಉತ್ತರ ಪ್ರದೇಶ ಮೂಲದ ವಿಂಟು ವಿಶ್ವಾಸ್ ಬಂಧಿತ ಪ್ರಮುಖ ಆರೋಪಿಯಾಗಿದ್ದು, ಈತನಿಂದ ಸುಮಾರು 44 ಲಕ್ಷ 86 ಸಾವಿರ ರೂಪಾಯಿ ಮೌಲ್ಯದ 290 ಗ್ರಾಂ ಚಿನ್ನಾಭರಣ ಹಾಗೂ ಒಂದು ಬೈಕ್ ವಶಕ್ಕೆ ಪಡೆಯಲಾಗಿದೆ. ಈತನ ವಿರುದ್ಧ ವಿವಿಧ ರಾಜ್ಯಗಳಲ್ಲಿ ಹಲವಾರು ಕಳ್ಳತನ ಪ್ರಕರಣಗಳು ದಾಖಲಾಗಿರುವುದು ತನಿಖೆ ವೇಳೆ ಬೆಳಕಿಗೆ ಬಂದಿದೆ.

ಪೊಲೀಸರ ತನಿಖೆಯಲ್ಲಿ ಮತ್ತೊಂದು ಬೆಚ್ಚಿಬೀಳಿಸುವ ಅಂಶವೂ ಬಹಿರಂಗವಾಗಿದೆ. ಕಳ್ಳತನದಿಂದ ದೊರಕಿದ ಚಿನ್ನಾಭರಣ ಮತ್ತು ಇತರ ವಸ್ತುಗಳನ್ನು ಮಾರಾಟ ಮಾಡಿ ಬಂದ ಹಣದಲ್ಲಿ ಆರೋಪಿಗಳು ಗೋವಾಗೆ ತೆರಳಿ ಕ್ಯಾಸಿನೋಗಳಲ್ಲಿ ಮೋಜು ಮಸ್ತಿ ಮಾಡುತ್ತಿದ್ದರು ಎನ್ನಲಾಗಿದೆ. ಕಳ್ಳತನದ ಹಣದಲ್ಲಿ ಐಶಾರಾಮಿ ಜೀವನ ನಡೆಸುತ್ತಿದ್ದ ಈ ಖದೀಮರು ಇದೀಗ ಪೊಲೀಸರ ಬಲೆಗೆ ಬಿದ್ದು ಜೈಲು ಸೇರಿದ್ದಾರೆ.

ಇನ್ನಷ್ಟು ತನಿಖೆ ನಡೆಸಿದ ವೇಳೆ, ಈ ಗ್ಯಾಂಗ್ ಸದಸ್ಯರು ಕರ್ನಾಟಕದ ಶಿವಮೊಗ್ಗ ಮತ್ತು ಕಲಬುರ್ಗಿ ಪೊಲೀಸರಿಗೆ ಮಾತ್ರವಲ್ಲದೆ ಗೋವಾ, ಮಹಾರಾಷ್ಟ್ರ, ಉತ್ತರ ಪ್ರದೇಶ ಹಾಗೂ ಮಧ್ಯ ಪ್ರದೇಶ ರಾಜ್ಯಗಳ ಪೊಲೀಸರೂ ಹುಡುಕುತ್ತಿದ್ದ ಆರೋಪಿಗಳು ಎಂಬುದು ಗೊತ್ತಾಗಿದೆ. ಹಲವು ರಾಜ್ಯಗಳಲ್ಲಿ ಇದೇ ಮಾದರಿಯಲ್ಲಿ ಮನೆ ಕಳ್ಳತನ ನಡೆಸಿದ್ದ ಶಂಕೆಯಿದ್ದು, ಪೊಲೀಸರು ಇದೀಗ ಅವರ ಅಪರಾಧ ಜಾಲದ ಸಂಪೂರ್ಣ ಮಾಹಿತಿ ಕಲೆಹಾಕುತ್ತಿದ್ದಾರೆ.

ಮನೆ ಕಳ್ಳತನ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಬೆಳಗಾವಿ ಜಿಲ್ಲಾ ಪೊಲೀಸರು ಸಾರ್ವಜನಿಕ-ರಿಗೆ ಎಚ್ಚರಿಕೆಯ ಸೂಚನೆ ನೀಡಿದ್ದಾರೆ. ಯಾರೇ ಮನೆಗೆ ಬೀಗ ಹಾಕಿ ದೂರದ ಊರಿಗೆ ತೆರಳುವವರಿದ್ದರೂ ಕಡ್ಡಾಯವಾಗಿ ಸ್ಥಳೀಯ ಪೊಲೀಸ್ ಠಾಣೆಗೆ ಮಾಹಿತಿ ನೀಡಬೇಕು ಎಂದು ಮನವಿ ಮಾಡಿದ್ದಾರೆ. ಮಾಹಿತಿ ನೀಡಿದರೆ ಸಂಬಂಧಿತ ಮನೆಗಳ ಮೇಲೆ ಪೊಲೀಸರು ವಿಶೇಷ ನಿಗಾ ಇಟ್ಟು, ಗಸ್ತು ಹೆಚ್ಚಿಸಿ ಸುರಕ್ಷತಾ ಕ್ರಮ ಕೈಗೊಳ್ಳುವುದಾಗಿ ತಿಳಿಸಿದ್ದಾರೆ. ಸಾರ್ವಜನಿಕರೂ ಅಪ-ರಿಚಿತರ ಬಗ್ಗೆ ಎಚ್ಚರಿಕೆಯಿಂದಿರಬೇಕು ಮತ್ತು ಅನುಮಾನಾಸ್ಪದ ವ್ಯಕ್ತಿಗಳ ಚಲನವಲನ ಕಂಡರೆ ತಕ್ಷಣ ಪೊಲೀಸರಿಗೆ ಮಾಹಿತಿ ನೀಡಬೇಕು ಎಂದು ಸಲಹೆ ನೀಡಿದ್ದಾರೆ.

ಸಾರಿಗೆ ನೌಕರರಿಗೆ ಸಿಹಿ ಸುದ್ದಿ ನೀಡಿದ ರಾಜ್ಯ ಸರ್ಕಾರ

ಬೆಂಗಳೂರು: ರಾಜ್ಯದ ನಾಲ್ಕು ಸಾರಿಗೆ ನಿಗಮಗಳ ನೌಕರರ (Transport Staff) ಮೂಲ ವೇತನದಲ್ಲಿ ಶೇ. 12.50 ರಷ್ಟು ಹೆಚ್ಚಳ (alary hike) ಮಾಡುವ ಮೂಲಕ ಸರ್ಕಾರ ಮಂಗಳವಾರ ಅಧಿಕೃತ ಆದೇಶ ಹೊರಡಿಸಿದೆ. ಆ ಮೂಲಕ ಕೆಎಸ್‌ಆರ್‌ಟಿಸಿ, ಬಿಎಂಟಿಸಿ, NWKRTC ಮತ್ತು ಎಎಬಿಬಿಇ ಸಾರಿಗೆ ಸಂಸ್ಥೆಗಳ ನೌಕರರ ದೀರ್ಘಕಾಲದ ಬೇಡಿಕೆಗೆ ಸ್ಪಂದಿಸಿರುವ ರಾಜ್ಯ ಸರ್ಕಾರ, ವೇತನ ಹೆಚ್ಚಿಸುವ ಮೂಲಕ ಗುಡ್ ನ್ಯೂಸ್ ನೀಡಿದೆ.

ಮುಖ್ಯಾಂಶಗಳು: ಸಾರಿಗೆ ನೌಕರರ ಸಂಬಳ ಹೆಚ್ಚಳ ಮಾಡಿ ಸರ್ಕಾರ ಆದೇಶ

ಕೊನೆಗೂ ಸಾರಿಗೆ ನೌಕರರ ದೀರ್ಘಕಾಲದ ಬೇಡಿಕೆಗೆ ಸ್ಪಂದಿಸಿದ ಸರ್ಕಾರ

2025 ಏಪ್ರಿಲ್ 1ರಿಂದ ಹೊಸ ವೇತನ ಪರಿಷ್ಕರಣೆ ಜಾರಿ

2025ರ ಏಪ್ರಿಲ್ 1ರಿಂದಲೇ ಪೂರ್ವಾನ್ವಯವಾಗುವಂತೆ ಹೊಸ ವೇತನ ಪರಿಷ್ಕರಣೆ ಮಾಡಲಾಗಿದೆ.

ಈ ಹೊಸ ಆದೇಶದ ಪ್ರಕಾರ, ಮಾರ್ಚ್ 31, 2025ರ ಅಂತ್ಯಕ್ಕೆ ನೌಕರರು ಪಡೆಯುತ್ತಿದ್ದ ಮೂಲ ವೇತನಕ್ಕೆ ಈ ಹೆಚ್ಚಳ ಅನ್ವಯವಾಗಲಿದ್ದು, ಪರಿಷ್ಕೃತ ವೇತನ ಶ್ರೇಣಿಯು ಮಾರ್ಚ್ 31, 2029ರವರೆಗೆ ಜಾರಿಯಲ್ಲಿರಲಿದೆ.

15 ತಿಂಗಳ ಹಿಂಬಾಕಿ ನೀಡಲು ನಿರ್ಧಾರ: ಹೆಚ್ಚಳ ವೇತನದ ಹಣವು ಜುಲೈ 1, 2026ರಿಂದ ನೌಕರರ ಮಾಸಿಕ ಸಂಬಳದೊಂದಿಗೆ ಪಾವತಿಯಾಗಲಿದೆ. ಇನ್ನು ಏಪ್ರಿಲ್ 1, 2025ರಿಂದ ಜೂನ್ 30, 2026ರವರೆಗಿನ 15 ತಿಂಗಳ ಹಿಂಬಾಕಿಯನ್ನು ಸಂಸ್ಥೆಗಳ ಆರ್ಥಿಕ ಪರಿಸ್ಥಿತಿಗೆ ಅನುಗುಣವಾಗಿ ಮುಂದಿನ ದಿನಗಳಲ್ಲಿ ಹಂತ ಹಂತವಾಗಿ ಪಾವತಿಸಲು ಸರ್ಕಾರ ತೀರ್ಮಾನಿಸಿದೆ.

ಹೆಚ್ಚುವರಿ ವೆಚ್ಚ ಎಷ್ಟು?: ಈ ವೇತನ ಪರಿಷ್ಕರಣೆಯಿಂದ ಕೆಎಸ್‌ಆರ್‌ಟಿಸಿ, ಬಿಎಂಟಿಸಿ, ಎನ್‌ಡಬ್ಲ್ಯೂಕೆಆರ್‌ಟಿಸಿ ಮತ್ತು ಕೆಕೆಆರ್‌ಟಿಸಿ ಸೇರಿ ನಾಲ್ಕು ಸಾರಿಗೆ ನಿಗಮಗಳಿಗೆ ಪ್ರತಿ ತಿಂಗಳು 72.80 ಕೋಟಿ ರೂ ಮತ್ತು ವಾರ್ಷಿಕ 873.64 ಕೋಟಿ ರೂ. ಹೆಚ್ಚುವರಿ ವೆಚ್ಚವಾಗಲಿದೆ. ಈ ಪರಿಷ್ಕರಣೆ ಒಟ್ಟು 1 ಲಕ್ಷದ 5 ಸಾವಿರ ಸಿಬ್ಬಂದಿಗಳಿಗೆ ಅನ್ವಯವಾಗಲಿದೆ.

ಹಿಂಬಾಕಿ ವೇತನ ಜಮೆ: ಈಗಾಗಲೇ 2023ರ ಮಾರ್ಚ್ ವೇತನ ಪರಿಷ್ಕರಣೆಯ 26 ತಿಂಗಳ ಹಿಂಬಾಕಿ ಮೊತ್ತ 1,271.92 ಕೋಟಿ ರೂ ಇದ್ದು, ಮೊದಲ ಕಂತಿನ 450 ಕೋಟಿ ರೂ ಸರ್ಕಾರ ಬಿಡುಗಡೆ ಮಾಡಿದ್ದು, ನೌಕರರ ಖಾತೆಗಳಿಗೆ ಜಮಾ ಮಾಡಲಾಗಿದೆ.

ಕೆಎಸ್‌ಆರ್‌ಟಿಸಿ, ಬಿಎಂಟಿಸಿ, ಎನ್‌ಡಬ್ಲ್ಯೂಕೆಆರ್‌ಟಿಸಿ ಮತ್ತು ಕೆಕೆಆರ್‌ಟಿಸಿ ನೌಕರರು ಶೇ.25ರಷ್ಟು ವೇತನ ಪರಿಷ್ಕರಣೆಗೆ ಪಟ್ಟು ಹಿಡಿದಿದ್ದರು. ರಾಜ್ಯಾದ್ಯಂತ ಮುಷ್ಕರ ಮಾಡಲಾಗಿತ್ತು. ಈ ಹಿಂದೆ ಬಿಜೆಪಿ ಸರ್ಕಾರ 2023 ಮಾರ್ಚ್ 15ರಂದು ಶೇ.15ರಷ್ಟು ವೇತನ ಹೆಚ್ಚಿಸಿತ್ತು. ನೌಕರರ ಬೇಡಿಕೆ ಶೇ.25 ಇದ್ದರೂ, ಸದ್ಯ ಶೇ.12.50 ಹೆಚ್ಚಳಕ್ಕೆ ರಾಜ್ಯ ಸರ್ಕಾರ ಸಮ್ಮತಿಸಿದೆ.

40 ವರ್ಷದ ಬಳಿಕ ಏಕರೂಪ ವಿಧಾನಸಭೆಗೆ ಚರ್ಚೆ: ಸತೀಶ್ ಮಹನಾ

ತಾಂಡವಪುರ: 40 ವರ್ಷಗಳ ಬಳಿಕ ದೇಶದ ಎಲ್ಲಾ ರಾಜ್ಯದ ವಿಧಾನಸಭೆಗಳ ಕಾರ್ಯವಿಧಾನ ಹಾಗೂ ನಡವಳಿಕೆಯ ಏಕರೂಪತೆ ತರುವ ನಿಟ್ಟಿನಲ್ಲಿ ಆರು ರಾಜ್ಯಗಳ ವಿಧಾನಸಭೆಯ ಸಭಾಧ್ಯಕ್ಷರನ್ನು ಒಗಳನ್ನೊಳಗೊಂಡ ಸಮಿತಿ ಸದಸ್ಯರು ಇದರ ಸಾಧಕ-ಬಾಧಕಗಳ ಕುರಿತಂತೆ ಮೊಟ್ಟ ಮೊದಲ ಬಾರಿಗೆ ಚರ್ಚಿಸಿರುವುದಾಗಿ ಸಮಿತಿಯ ಅಧ್ಯಕ್ಷ ಹಾಗೂ ಉತ್ತರ ಪ್ರದೇಶದ ವಿಧಾನಸಭೆಯ ಸಭಾಧ್ಯಕ್ಷ ಸತೀಶ್ ಮಹನಾ ತಿಳಿಸಿದರು.

ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ನಡೆದ ಸಮಿತಿ ಸುದ್ದಿಗೋಷ್ಠಿಯಲ್ಲಿ ಸಭೆ ಬಳಿಕ ಮಾತನಾಡಿದ ಅವರು, ಲೋಕಸಭೆಯ ಸಭಾಧ್ಯಕ್ಷರು ಆರು ರಾಜ್ಯಗಳ ವಿಧಾನಸಭೆಯ ಸಭಾಧ್ಯಕ್ಷರನ್ನು ಒಗಳನ್ನೊಳಗೊಂಡ ಸಮಿತಿ ಸದಸ್ಯರು ರಚಿಸಿದ್ದಾರೆ. ಸಮಿತಿಯು ವಿವಿಧ ರಾಜ್ಯಗಳ ಸಭಾಧ್ಯಕ್ಷರುಗಳೊಂದಿಗೆ ಚರ್ಚಿಸಿ ವರದಿ ಸಿದ್ಧಪಡಿಸಲಿದೆ. ಸಮಿತಿಯಲ್ಲಿ ನಾಗಲ್ಯಾಂಡ್, ಹಿಮಾಚಲ್ ಪ್ರದೇಶ, ಕರ್ನಾಟಕ, ಮಹಾರಾಷ್ಟ್ರ ಮತ್ತು ದೆಹಲಿಯ ವಿಧಾನಸಭಾ ಸಭಾಧ್ಯಕ್ಷರುಗಳು ಸಮಿತಿಯ ಸದಸ್ಯರಾಗಿದ್ದಾರೆ. ಎಲ್ಲಾ ರಾಜ್ಯಗಳ ವಿಧಾನಮಂಡಲದಲ್ಲಿರುವ ನೀತಿ ನಿಯಮಗಳು ಹಾಗೂ ನಿಯಮಗಳನ್ನು ಉತ್ತಮಗೊಳಿಸುವ ಬಗ್ಗೆ ಚರ್ಚೆ ನಡೆಸಿ ವರದಿ ಸಿದ್ಧಪಡಿಸಲಿದೆ. ಇದರೊಂದಿಗೆ ಬೇರೆ ರಾಜ್ಯಗಳ ಸಭಾಧ್ಯಕ್ಷರು ನೀಡುವ ಸಲಹೆಗಳನ್ನು ಸಹ ಪಡೆಯಲಾಗುವುದು ಎಂದರು.

40 ವರ್ಷಗಳ ಹಿಂದೆ ವಿಧಾನ ಮಂಡಲದ ನೀತಿ ನಿಯಮಗಳನ್ನು ರೂಪಿಸಲಾಗಿತ್ತು. ಈ ಹಿಂದೆ 25 ರಿಂದ 30 ವರ್ಷಗಳಿಗೆ ತಲೆಮಾರು ಬದಲಾವಣೆಯಾಗುತ್ತಿತ್ತು. ಇಂದು 5 ವರ್ಷಗಳಲ್ಲಿ ತಲೆಮಾರು ಬದಲಾವಣೆಯಾಗುತ್ತಿದೆ. ಈ ಹಿನ್ನಲೆಯಲ್ಲಿ ವಿಧಾನಮಂಡಲದಲ್ಲಿ ಎಲ್ಲಾ ರಾಜ್ಯಗಳ ಉತ್ತಮ ಸಲಹೆಗಳನ್ನು ಪಡೆದು ಏಕರೂಪತೆ ತರುವ ನಿಟ್ಟಿನಲ್ಲಿ ಸಮಿತಿ ಕಾರ್ಯನಿರ್ವಹಿಸುತ್ತಿದೆ. ತಂತ್ರಜ್ಞಾನ, ಮೂಲಸೌಕರ್ಯ, ಹಣಕಾಸು ವ್ಯವಹಾರ ಸೇರಿ ವಿವಿಧ ವ್ಯವಸ್ಥೆಗಳು ಬದಲಾವಣೆ ಹಾಗೂ ಸಾರ್ವಜನಿಕರ ಶ್ರೇಯೋಭಿವೃದ್ಧಿಯನ್ನು ಮುಖ್ಯವಾಗಿ ಇರಿಸಿಕೊಂಡು ಸಮಿತಿ ಚರ್ಚೆ ನಡೆಸುತ್ತಿದೆ. ಸಮಿತಿಯು ವರದಿಯನ್ನು ಸಿದ್ಧಪಡಿಸಿ ಲೋಕಸಭಾಧ್ಯಕ್ಷರಿಗೆ ಸಲ್ಲಿಸಲಿದೆ. ಇಂದು ಪ್ರಥಮ ಸಭೆ ನಡೆಸಲಾಗಿದ್ದು, ಮುಂದಿನ ಸಭೆಯನ್ನು ಒಂದೆರಡು ತಿಂಗಳೊಳಗಾಗಿ ದೆಹಲಿಯಲ್ಲಿ ನಡೆಸಲಾಗುವುದು. ಸಮಿತಿಗೆ ವರದಿ ನೀಡಲು 6 ತಿಂಗಳ ಕಲಾವಕಾಶ ನೀಡಲಾಗಿದೆ ಎಂದರು.

ಕರ್ನಾಟಕ ವಿಧಾನಸಭೆಯ ಸಭಾಧ್ಯಕ್ಷ ಯು.ಟಿ.ಖಾದರ್ ಮಾತನಾಡಿ, 1891ರಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಮೈಸೂರಿನಲ್ಲಿ ಪ್ರಜಾಪ್ರತಿನಿಧಿ ಸಭೆ ನಡೆಸಿ ಇತಿಹಾಸ ಬರೆದಿದ್ದರು. ಈ ಹಿನ್ನಲೆಯಲ್ಲಿ ಸಮಿತಿಯು ಪ್ರಥಮ ಸಭೆಯನ್ನು ಮೈಸೂರಿನಲ್ಲಿ ನಡೆಸಲಾಗಿದೆ. ಏಕರೂಪದ ವಿಧಾನಸಭೆಯ ನಿಯಮ ಜಾರಿಯಿಂದ ಯಾವುದೇ ವಿಧವಾದ ಒಕ್ಕೂಟ ವ್ಯವಸ್ಥೆಗೆ ಧಕ್ಕೆ ಆಗುವುದಿಲ್ಲ. ಬದಲಿಗೆ ಬಲಿಷ್ಠ ಭಾರತಕ್ಕೆ ಇದು ಸಹಕಾರಿಯಾಗಲಿದೆ. ಸಮಿತಿಯೂ ಇತರ ರಾಜ್ಯದ ವಿಧಾನಸಭಾಧ್ಯಕ್ಷರ ಸಲಹೆಯನ್ನು ಪಡೆಯಲಿದೆ. ಅಲ್ಲದೆ, ಕಲಾಪ ನಡೆಯುವ ದಿನಾಂಕ, ಕಲಾಪಗಳ ಮಹತ್ವ, ಕಲಾಪ ತೀರ್ಮಾನ ಇನ್ನಿತರರ ವಿಚಾರಗಳ ಕುರಿತಂತೆ ಸಮಗ್ರವಾಗಿ ಚರ್ಚಿಸಲಾಗಿದೆ. ಈ ಮತ್ತಷ್ಟು ಚರ್ಚಿಸಿ ಅಂತಿಮವಾಗಿ ರೂಪುರೇಷೆ ಸಿದ್ಧಪಡಿಸಲಾಗುವುದು ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಸಮಿತಿಯ ಸದಸ್ಯರುಗಳಾದ ನಾಗಾಲ್ಯಾಂಡ್ ವಿಧಾನಸಭೆಯ ಸಭಾಧ್ಯಕ್ಷ ಶ್ಯಾರಿಗ್ಯಾನ್ ಲಾಂಗ್ಕುಮೇರ್, ಹಿಮಾಚಲ ಪ್ರದೇಶದ ವಿಧಾನಸಭೆಯ ಸಭಾಧ್ಯಕ್ಷ ಕುಲ್ ದೀಪ್ ಸಿಂಗ್ ಪಠಾನೀಯ ಹಾಗೂ ದೆಹಲಿ ವಿಧಾನಸಭೆಯ ಸಭಾಧ್ಯಕ್ಷ ವಿಜೇಂದರ್ ಗುಪ್ತ ಇನ್ನಿತರರು ಉಪಸ್ಥಿತರಿದ್ದರು.

ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ನೀರಿನ ಸಮಸ್ಯೆ-ಬಗೆಹರಿಸಿದ ಶಾಸಕ ದರ್ಶನ್

ತಾಂಡವಪುರ: ನಂಜನಗೂಡು ವಿಧಾನ ಸಭಾ ಕ್ಷೇತ್ರಕ್ಕೆ ಸೇರುವ ನಂಜನಗೂಡು ನಗರದ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ನೀರಿನ ಸಮಸ್ಯೆ ಕುರಿತು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆದ ವಿಷಯವನ್ನು ಗಂಭೀರವಾಗಿ ಪರಿಗಣಿಸಿದ ಶಾಸಕರುಇಂದು ಆಸ್ಪತ್ರೆಗೆ ನಂಜನಗೂಡು ವಿಧಾನಸಭಾ ಕ್ಷೇತ್ರದ ಶಾಸಕರಾದ ದರ್ಶನ್ ಧ್ರುವನಾರಾಯಣ್ ಅವರು ಭೇಟಿ ನೀಡಿ ವೀಕ್ಷಣೆ ಮಾಡಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

ಈ ಸಂದರ್ಭದಲ್ಲಿ ಸಮಸ್ಯೆಗೆ ಕಾರಣಕರ್ತರಾದ ಸಿಬ್ಬಂದಿಯನ್ನು ಸ್ಥಳದಲ್ಲೇ ಅಮಾನತುಗೊಳಿಸಿ, ಇಂತಹ ನಿರ್ಲಕ್ಷ್ಯ ಮರುಕಳಿಸದಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಸಾರ್ವಜನಿಕರಿಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಸಮರ್ಪಕವಾಗಿ ಒದಗಿಸುವುದು ನಮ್ಮ ಮೊದಲ ಆದ್ಯತೆಯಾಗಿದೆ ಎಂದರು.

ಈ ವೇಳೆ ಮಾಜಿ ಶಾಸಕರಾದ ಕಳಲೆ ಕೇಶವಮೂರ್ತಿ DHO ಡಾ. ಕುಮಾರಸ್ವಾಮಿ AMO ನಾಗರಾಜ್ THO ಈಶ್ವರ್ ರವರು ಸೇರಿದಂತೆ ಅಧಿಕಾರಿಗಳು, ಸಿಬ್ಬಂದಿ ವರ್ಗದವರು ಹಾಜರಿದ್ದರು

ಸಮಾಜ ಸೇವಕ ಆರ್.ಟಿ.ಓ ಮಲ್ಲಿಕಾರ್ಜುನ್ ಹುಟ್ಟುಹಬ್ಬ, ಪ್ರತಿಭಾ ಪುರಸ್ಕಾರ,ಉಚಿತ ಆರೋಗ್ಯ ಶಿಬಿರ ಜೊತೆಗೆ.ರಾಜ್ಯ ಮಟ್ಟದ ರಂಗಕುಣಿತ ಉತ್ಸವ-ಸ್ಪರ್ಧೆಗೆ ಆಹ್ವಾನ

ಕೃಷ್ಣರಾಜಪೇಟೆ: 20.ರಂದು ಸಮಾಜ ಸೇವಕ ಆರ್.ಟಿ.ಓ. ಮಲ್ಲಿಕಾರ್ಜುನ್ ಹುಟ್ಟುಹಬ್ಬದ ಅಂಗವಾಗಿ ಶ್ರೀ ಮಲ್ಲಿಕಾರ್ಜುನ ಚಾರಿಟಬಲ್ ಟ್ರಸ್ಟ್ ವತಿಯಿಂದ ಪ್ರತಿಭಾ ಪುರಸ್ಕಾರ, ಸಾಧಕರಿಗೆ ಸನ್ಮಾನ, ಉಚಿತ ಆರೋಗ್ಯ ಶಿಬಿರ, ರಕ್ತದಾನ ಶಿಬಿರ,ರಾಜ್ಯ ಮಟ್ಟದ ರಂಗ ಕುಣಿತ ಸ್ಪರ್ಧೆ, ರೋಗಿಗಳಿಗೆ ಹಣ್ಣು ಹಂಪಲು ವಿತರಣೆ, ಖ್ಯಾತ ಹಾಸ್ಯ ಕಲಾವಿದರಿಂದ ನಗೆ ಹಬ್ಬ, ಮುಂತಾದ ಕಾರ್ಯಕ್ರಮಗಳು ನಡೆಯಲಿದ್ದು ತಾಲ್ಲೂಕಿನ ಜನತೆ ಇದರ ಸದುಪಯೋಗ ಪಡಿಸಿಕೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಮೈಸೂರಿನ ಅನಘ ಆಸ್ಪತ್ರೆ ತಜ್ಞ ವೈದ್ಯ ಡಾ.ಮಹೇಶ್ ತಿಳಿಸಿದರು,

ಪಟ್ಟಣದ ಜಯನಗರ ಬಡಾವಣೆಯಲ್ಲಿರುವ ಶ್ರೀ ಮಲ್ಲಿಕಾರ್ಜುನ ಚಾರಿಟಬಲ್ ಕಚೇರಿಯಲ್ಲಿ ಕಾರ್ಯಕ್ರಮದ ಆಹ್ವಾನ ಪತ್ರಿಕೆ ಬಿಡು